ಈ ಅವಧಿಯಲ್ಲಿ ಮಠಗಳಿಗೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

ಆ)

ದೇಸ್ಥಾನದ ಹೆಸರು	ಬಿಡುಗಡೆ ಮಾಡಿರುವ ಮೊತ್ತ	ಖರ್ಚಾಗಿರುವ ಮೊತ್ತ	ಬಾಕಿ ಉಳಿದಿರುವ ಮೊತ್ತ
ಶ್ರೀ ಬಸವೇಶ್ವರ ದೇವಸ್ಥಾನ, ಕೋಸಂ ಗ್ರಾಮ, ಭಾಲ್ಕಿ	0.90	0.90	0
ಶ್ರೀ ಸಂಗಮೇಶ್ವರ ದೇವಸ್ಥಾನ, ಹಾಲಹಳ್ಳಿ ಗ್ರಾಮ, ಭಾಲ್ಕಿ	2.00	0	2.00
ಶ್ರೀ ಸಂಗಮೇಶ್ವರ ದೇವಸ್ಥಾನ, ಹಾಲಹಳ್ಳಿ ಗ್ರಾಮ, ಭಾಲ್ಕಿ	2.00	0	2.00

ಇ) ಅನುದಾನ ಕೋರಿ ಸ್ವೀಕೃತವಾಗುವ ಮನವಿಗಳನ್ನು ಆಯವ್ಯಯದ ಲಭ್ಯತೆಗನುಗುಣವಾಗಿ ಪರಿಶೀಲಿಸಿ, ಬಿಡುಗಡೆ ಮಾಡಲಾಗುತ್ತಿದೆ.

ಈ) ಮೇಲಿನಂತೆ.

ಪ್ರೌಢ ಶಾಲೆಗಳನ್ನು ಮೇಲ್ದರ್ಜೆಗೇರಿಸುವ ಕುರಿತು
271 (311)
ಶ್ರೀ ಅಭಯ್ ಪಾಟೀಲ್ (ಬೆಳಗಾಂ ದಕ್ಷಿಣ)

ಅ) ಬೆಳಗಾವಿ (ದಕ್ಷಿಣ) ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು? ಶಾಲಾವಾರು ವಿವಿಧ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು (ವಿವರ ನೀಡುವುದು)

ಆ) ಸದರಿ ಪ್ರೌಢ ಶಾಲೆಗಳನ್ನು ಪದವಿ ಪೂರ್ವ ಮಹಾವಿದ್ಯಾಲಯಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಇದ್ದಲ್ಲಿ, ಯಾವ ಸಾಲಿನಿಂದ ಪ್ರಾರಂಭಿಸಲಾಗುವುದು?

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ
(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬೆಳಗಾವಿ (ದಕ್ಷಿಣ) ಮತಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 04 ಪ್ರೌಢಶಾಲೆಗಳು ಇರುತ್ತವೆ. ಅಲ್ಲಿನ ವಿದ್ಯಾರ್ಥಿಗಳ ಶಾಲಾವಾರು ವಿವರ ಈ ಕೆಳಕಂಡಂತಿದೆ.

ಕ್ರ ಸಂ	ಶಾಲೆಯ ಹೆಸರು	ವಿದ್ಯಾರ್ಥಿಗಳ ಸಂಖ್ಯೆ			
		8ನೇ ತರಗತಿ	09ನೇ ತರಗತಿ	10ನೇ ತರಗತಿ	ಒಟ್ಟು
01	ಸರಸ್ವತಿ ಪದವಿ ಪೂರ್ವ ಕಾಲೇಜು, ಬೆಳಗಾವಿ	344	337	398	1079
02	ಚಿಂತಾಮಣಿರಾವ್ ಪದವಿ ಪೂರ್ವ ಕಾಲೇಜು, ಬೆಳಗಾವಿ	163	219	257	639
03	ಸರ್ಕಾರಿ ಪ್ರೌಢಶಾಲೆ, ವಡಗಾಂವಿ,	119	103	72	294
04	ಸರ್ಕಾರಿ, ಪ್ರೌಢಶಾಲೆ, ಮಚ್ಚೆ	93	53	84	230
	ಒಟ್ಟು	**719**	**712**	**811**	**2242**

ಆ) ಈ ಬಗೆಗಿನ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಇ) ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಲಾಗುವುದು.

ಶಿಕ್ಷಣ ಸಂಸ್ಥೆಗಳ ಅನುಮೋಧನೆ
277 (397)
ಡಾ॥ ಬಗಲಿ ಸಾರ್ವಭೌಮ ಸಾತಗೌಡ (ಇಂಡಿ)

ಅ) ಇಂಡಿ ವಿಧಾನಸಭಾ ಕ್ಷೇತ್ರದ ಅಗರಖೇಡ ಗ್ರಾಮದ ಖಾಸಗಿ ಶಿಕ್ಷಣ ಸಂಸ್ಥೆಯ ಪ್ರೌಢ ಶಾಲೆಗೆ ವಿಜಾಪುರದ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಅನುಮತಿ ನೀಡಿ ನಂತರ ಕೆಲವೇ ದಿನಗಳಲ್ಲಿ ಅನುಮತಿ ರದ್ದು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮಗಳೇನು;

ಆ) ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ವಿಜಾಪುರ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಅಸಮರ್ಥ ಅಧಿಕಾರಿಯೆಂದು ಮತ್ತು ಇವರ ಕಾರ್ಯಾಲಯದಲ್ಲಿ ಭ್ರಷ್ಟಾಚಾರ ನಡೆಯುತ್ತಿರುವ ಬಗ್ಗೆ ಅವರನ್ನು ವರ್ಗಾವಣೆ ಕೂಡಲೇ ಮಾಡಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವರು, ಇಂಡಿ